ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: 24 ಶಾಸಕರ ಬಗ್ಗೆ ಮಾಹಿತಿ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ          ದಿನಾಂಕ : DATE : 1/4/2021

# ಐವರಿಗೆ ಸಮನ್ಸ್ ಜಾರಿ

ಉದಯ 1/4/21

**ಬೆಂಗಳೂರು:** ಜೆಡಿಎಸ್ ತೊರೆದು ಬಿಜೆಪಿ ಸೇರಲು ಐದು ಕೋಟಿ ರೂ. ಆಮಿಷವೊಡ್ಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಜನಪ್ರತಿನಿಧಿಗಳ ನ್ಯಾಯಾಲಯ ಏ.5ರಂದು ಖುದ್ದು ಹಾಜರಾಗುವಂತೆ ಉಪಮುಖ್ಯಮಂತ್ರಿ ಡಾ.ಸಿ.ಎನ್.ಅಶ್ವತ್ಥ ನಾರಾಯಣ, ಸಚಿವ ಸಿ.ಪಿ.ಯೋಗೇಶ್ವರ್, ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಸೇರಿ ಐವರಿಗೆ ಸಮನ್ಸ್ ಜಾರಿ ಮಾಡಿದೆ. ಬಿಜೆಪಿಗೆ ಸೇರಲು 5 ಕೋಟಿ ರೂ. ಆಮಿಷವೊಡ್ಡಿದರ ಕುರಿತು ಜೆಡಿಎಸ್ ಶಾಸಕ ಕೆ.ಶ್ರೀನಿವಾಸಗೌಡ ವಿಧಾನಸಭೆಯಲ್ಲಿ ಆರೋಪಿಸಿದ್ದರು. ಈ ಬಗ್ಗೆ ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಅವರ ಗಮನಕ್ಕೆ ತರಲಾಗಿತ್ತು ಎಂದು ಹೇಳಿಕೆ ನೀಡಿದ್ದರು. ಈ ಸಂಬಂಧ ಸಾಮಾಜಿಕ ಕಾರ್ಯಕರ್ತ ಟಿ.ಜೆ.ಅಬ್ರಹಾಂ ಜನಪ್ರತಿನಿಧಿಗಳ ವಿರುದ್ಧ ದೂರು ಸಲ್ಲಿಕೆ ಮಾಡಿದ್ದರು. ಅದರ ವಿಚಾರಣೆ ನಡೆಸಿದ ನ್ಯಾಯಾಲಯ ಉಪಮುಖ್ಯಮಂತ್ರಿ ಡಾ.ಸಿ.ಎನ್.ಅಶ್ವತ್ಥ ನಾರಾಯಣ, ಸಚಿವ ಸಿ.ಪಿ.ಯೋಗೇಶ್ವರ್, ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ, ಶಾಸಕರಾದ ಶ್ರೀನಿವಾಸಗೌಡ, ಎಸ್.ಆರ್.ವಿಶ್ವನಾಥ್‌ಗೆ ಖುದ್ದು ಹಾಜರಾಗುವಂತೆ ಸಮನ್ಸ್ ಜಾರಿಗೊಳಿಸಲಾಗಿದೆ.